**ಕರ್ನಾಟಕ ಸರ್ಕಾರ**

**ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು**

**E-mail:Commissioner.pue@gmail.com. * Ph. No.23361857, 23361858* Fax-23361852**

ಸಂಖ್ಯೆ:ಪಿಯು/09/ಸಿಬ್ಬಂದಿ/ಸಿಆರ್-3/ಎನ್ಓಸಿ/2015-16 ದಿನಾಂಕ೨೮-09-2016.

# ಜ್ಞಾಪನ

**ವಿಷಯ:-** ಕೇಂದ್ರ/ರಾಜ್ಯ ಸರ್ಕಾರ, ವಿಶ್ವವಿದ್ಯಾಲಯ ಹಾಗೂ ಇತರೆ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅನುಮತಿ ನೀಡುವ ಬಗ್ಗೆ.

**ಉಲ್ಲೇಖ:-** ಜಿಲ್ಲಾ ಉಪನಿರ್ದೇಶಕರು, ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಸಿಬ್ಬಂದಿ ವರ್ಗದವರ ಪತ್ರಗಳು.

-*-

ಸರ್ಕಾರಿ ಪದವಿ ಪೂರ್ವ ಕಾಲೇಜು ಹಾಗೂ ಉಪನಿರ್ದೇಶಕರುಗಳ ಕಛೇರಿಗಳಲ್ಲಿ ಸೇವೆ ಸಲ್ಲಿಸುತ್ತಿರುವ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಯವರು ರಾಜ್ಯ ಸರ್ಕಾರದ ಇತರ ಇಲಾಖೆಗಳಲ್ಲಿ ಖಾಲಿಯಿರುವ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅನುಮತಿ ಕೋರಿ ಪ್ರಾಂಶುಪಾಲರು ಹಾಗೂ ಉಪನಿರ್ದೇಶಕರ ಮುಖೇನ ಮನವಿ ಪತ್ರಗಳನ್ನು ಸಲ್ಲಿಸಿರುತ್ತಾರೆ. ಸದರಿ ಪ್ರಸ್ತಾವನೆಗಳನ್ನು ಪರಿಶೀಲಿಸಿ, ಈ ಕೆಳಕಂಡ ಉಪನ್ಯಾಸಕರುಗಳು ಹಾಗೂ ಇತರೆ ಸಿಬ್ಬಂದಿ ವರ್ಗದವರ ಹೆಸರಿನ ಮುಂದೆ ತೋರಿಸಿರುವ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಷರತ್ತಿಗೊಳಪಟ್ಟು ಅನುಮತಿ ನೀಡಬಹುದಾಗಿದೆ:

| ಕ್ರಸ | ಹೆಸರು ಮತ್ತು ಕಾಲೇಜು ವಿಳಾಸ<br>ಶ್ರೀಮತಿ/ಶ್ರೀ | ಅನುಮತಿ ಕೋರಲಾದ ಹುದ್ದೆ |
|---|---|---|
| 01 | ರಮೇಶ ಹ ತಳವಾರ,<br>ಅರ್ಥಶಾಸ್ತ್ರ ಉಪನ್ಯಾಸಕರು,<br>ಸರ್ಕಾರಿ ಪದವಿ ಪೂರ್ವ ಕಾಲೇಜು, ಚಿಕ್ಕನರಗುಂದ,<br>ನರಗುಂದ ತಾ, ಗದಗ ಜಿಲ್ಲೆ. | ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹಾಗೂ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ಹುದ್ದೆಗಳಿಗೆ |
| 02 | ವೆಂಕಟೇಶ.ಎಸ್.ಆರ್.<br>ಅರ್ಥಶಾಸ್ತ್ರ ಉಪನ್ಯಾಸಕರು,<br>ಸರ್ಕಾರಿ ಪದವಿ ಪೂರ್ವ ಕಾಲೇಜು, ಶಿರಂಗಾಲ,<br>ಸೋಮವಾರಪೇಟೆ ತಾ, ಕೊಡಗು ಜಿಲ್ಲೆ. | ಮೈಸೂರು ವಿಶ್ವವಿದ್ಯಾಲಯದ ಉಪ ಪ್ರಾಧ್ಯಾಪಕರ ಹುದ್ದೆಗೆ |
| 03 | ವಿಜಯ ಕುಮಾರ,<br>ವಾಣಿಜ್ಯಶಾಸ್ತ್ರ ಉಪನ್ಯಾಸಕರು,<br>ಸರ್ಕಾರಿ ಪದವಿ ಪೂರ್ವ ಕಾಲೇಜು, ಅರಳೇಶ್ವರ,<br>ಹಾನಗಲ್ಲ ತಾ, ಹಾವೇರಿ ಜಿಲ್ಲೆ. | ಕರ್ನಾಟಕ ರಾಜ್ಯ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಹಾಗೂ ಸದರಿ ನಿಗಮದ ವಿವಿಧ ಕಂಪೆನಿಗಳಲ್ಲಿ ಸಹಾಯಕ ಲೆಕ್ಕಾಧಿಕಾರಿ ಹುದ್ದೆಗೆ |
| 04 | ಶ್ರೀಮತಿ ರೇಣುಕ.ಎಸ್.<br>ಅರ್ಥಶಾಸ್ತ್ರ ಉಪನ್ಯಾಸಕರು,<br>ಸರ್ಕಾರಿ ಪದವಿ ಪೂರ್ವ ಕಾಲೇಜು, ಜೆ.ಸಿ.ನಗರ,<br>ಬೆಂಗಳೂರು. | ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆಯಲ್ಲಿ ಸಹಾಯಕ ನಿರ್ದೇಶಕರ ಹುದ್ದೆಗೆ. |
| 05 | ಪ್ರಸನ್ನ.ಜಿ.ಎಸ್.<br>ಪ್ರ.ದ.ಸಹಾಯಕರು,<br>ಸರ್ಕಾರಿ ಪದವಿ ಪೂರ್ವ ಕಾಲೇಜು, ಬೆಟ್ಟದಪುರ,<br>ಪಿರಿಯಾಪಟ್ಟಣ ತಲ್ಲೂಕು, ಮೈಸೂರು ಜಿಲ್ಲೆ. | ಕರ್ನಾಟಕ ರಾಜ್ಯ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಹಾಗೂ ಸದರಿ ನಿಗಮದ ವಿವಿಧ ಕಂಪೆನಿಗಳಲ್ಲಿ ಸಹಾಯಕ ಲೆಕ್ಕಾಧಿಕಾರಿ ಹುದ್ದೆಗೆ |

| | | |
|---|---|---|
| 06 | ವಾಗೀಶ.ಎಂ.ಎಸ್.<br>ದ್ವಿದ.ಸಹಾಯಕರು,<br>ಸರ್ಕಾರಿ ಪದವಿ ಪೂರ್ವ ಕಾಲೇಜು, ಕಣತೂರು,<br>ಆಲೂರು ತಾ, ಹಾಸನ ಜಿಇಲ್ಲೆ. | ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹುದ್ದೆಗೆ |
| 07 | ಜಮೀರ್ ಪಾಷ,<br>ದ್ವಿದ.ಸಹಾಯಕರು,<br>ಸರ್ಕಾರಿ ಪದವಿ ಪೂರ್ವ ಕಾಲೇಜು, ಮಡಿವಾಳ,<br>ಬೆಂಗಳೂರು | ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹಾಗೂ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ಹುದ್ದೆಗಳಿಗೆ |
| 08 | ರಮೇಶ್.ಆರ್.<br>ರಾಜ್ಯಶಾಸ್ತ್ರ ಉಪನ್ಯಾಸಕರು,<br>ಸರ್ಕಾರಿ ಪದವಿ ಪೂರ್ವ ಕಾಲೇಜು, ಮಲ್ಲನಕುಪ್ಪೆ,<br>ಮದ್ದೂರು ತ, ಮಂಡ್ಯ ಜಿಲ್ಲೆ. | ಮೈಸೂರು ವಿಶ್ವವಿದ್ಯಾಲಯದ ಉಪ ಪ್ರಾಧ್ಯಾಪಕರ ಹುದ್ದೆಗೆ |
| 09 | ವಿಜಯಲಕ್ಷ್ಮಿ ಬದ್ದಿ,<br>ವಾಣಿಜ್ಯಶಾಸ್ತ್ರ ಉಪನ್ಯಾಸಕರು,<br>ಸರ್ಕಾರಿ ಪದವಿ ಪೂರ್ವ ಕಾಲೇಜು, ಬೊಮ್ಮನಹಳ್ಳಿ,<br>ಹಾವೇರಿ ಜಿಲ್ಲೆ. | ಕರ್ನಾಟಕ ರಾಜ್ಯ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಹಾಗೂ ಸದರಿ ನಿಗಮದ ವಿವಿಧ ಕಂಪೆನಿಗಳಲ್ಲಿ ಸಹಾಯಕ ಲೆಕ್ಕಾಧಿಕಾರಿ ಹುದ್ದೆಗೆ |

**ಷರತ್ತುಗಳು:**

1. ಸದರಿ ಸಿಬ್ಬಂದಿಗಳು, ಪರೀಕ್ಷೆಗೆ ಸಂಬಂಧಿಸಿದಂತೆ ಅಧ್ಯಯನವನ್ನು ತಮ್ಮ ಸ್ವಂತ ಖರ್ಚಿನಲ್ಲಿ ಕೈಗೊಳ್ಳತಕ್ಕದ್ದು. ಸಿಬ್ಬಂದಿಗಳು, ಸದರಿ ಪರೀಕ್ಷೆಯ ಅಧ್ಯಯನದ ನಿಮಿತ್ತ ಸರ್ಕಾರ/ಇಲಾಖೆಗೆ ಯಾವುದೇ ಆರ್ಥಿಕ ಹೊರೆ ಉಂಟಾಗತಕ್ಕದ್ದಲ್ಲ.

2. ಸದರಿ ಸಿಬ್ಬಂದಿಗಳು/ಉಪನ್ಯಾಸಕರುಗಳು, ವಿದ್ಯಾರ್ಥಿಗಳ ಪಾಠ-ಪ್ರವಚನಗಳಿಗೆ ತೊಂದರೆ ಉಂಟಾಗದಂತೆ ಬಿಡುವಿನ ವೇಳೆಯಲ್ಲಿ, ಪರೀಕ್ಷೆಯ ಅಧ್ಯಯನಕ್ಕೆ ಬೇಕಾದ ಸಿದ್ಧತೆ ಮಾಡಿಕೊಳ್ಳತಕ್ಕದ್ದು.

3. ಸದರಿ ಸಿಬ್ಬಂದಿಗಳು ಸದರಿ ಪರೀಕ್ಷೆಯ ಅಧ್ಯಯನದ ನಿಮಿತ್ತ ವರ್ಗಾವಣೆ ಕೋರುವಂತಿಲ್ಲ ಅಥವಾ ಅವರ ಪರೀಕ್ಷೆಯ ಅಧ್ಯಯನ ಸರ್ಕಾರದ/ಇಲಾಖೆಯ ವರ್ಗಾವಣೆಗೆ ಅಡ್ಡಿ ಬರುವಂತಿಲ್ಲ.

4. ಸದರಿ ಸಿಬ್ಬಂದಿಗಳು /ಉಪನ್ಯಾಸಕರುಗಳು ಬೇರೆ ಯಾವುದೇ ಇಲಾಖೆಯ ಹುದ್ದೆಗೆ ಆಯ್ಕೆಯಾದಲ್ಲಿ, ಈಗ ಕಾರ್ಯ ನಿರ್ವಹಿಸುತ್ತಿರುವ ಉಪನ್ಯಾಸಕರ ಹುದ್ದೆಯಿಂದ ಬಿಡುಗಡೆ ಹೊಂದುವ ಮೊದಲು ಇಲಾಖೆಯ ಅನುಮತಿ ಪಡೆಯತಕ್ಕದ್ದು.

ಜಂಟಿ ನಿರ್ದೇಶಕರು(ಆಡಳಿತ),
ಪದವಿ ಪೂರ್ವ ಶಿಕ್ಷಣ ಇಲಾಖೆ.

**ಪ್ರತಿಗಳು:**

1. ಸಂಬಂಧಪಟ್ಟ ಜಿಲ್ಲಾ ಉಪ ನಿರ್ದೇಶಕರಿಗೆ.
2. ಸಹಾಯಕ ನಿರ್ದೇಶಕರು, ಇ-ಆಡಳಿತ, ಪಪೂಶಿಇ, ಬೆಂಗಳೂರು.
3. ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರಿಗೆ ಹಾಗೂ
4. ಕಛೇರಿ ಪ್ರತಿ.